**<u>ಅಸಲು ದಾವಾ ಸಂಖ್ಯೆ-27/2018</u>** **ಪಿ.ಡಬ್ಲ್ಯೂ:- 1**

ದಿನಾಂಕಃ **01-09-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-</u>

ನಿಪಿ-4 ರ ಮರಣ ಶಾಸನದ ಮೂಲ ಪ್ರತಿ ನನ್ನ ಬಳಿ ಇದ್ದರೂ ಸಹ ನನ್ನ ಬಳಿ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದೇವಿರಮ್ಮ ನನಗೆ ನಿಪಿ-4 ಮರಣ ಶಾಸನವನ್ನು ಬರೆದುಕೊಟ್ಟಿರುವುದಿಲ್ಲ ನಾನೇ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಿಪಿ-4 ಮರಣ ಶಾಸನದ ದಾಖಲೆಯ ದೃಢೀಕೃತ ನಕಲನ್ನು ಹಾಜರುಪಡಿಸಲು ಬರುವುದಿಲ್ಲ ಎಂದರೆ ಸರಿಯಲ್ಲ. ನಾನು ನಿಪಿ-4 ಮರಣ ಶಾಸನದ ಆಧಾರದ ಮೇಲೆ ಯಾವುದೇ ಹಕ್ಕನ್ನು ಕೇಳಲು ಅರ್ಹನಲ್ಲ ಎಂದರೆ ಸರಿಯಲ್ಲ. ಸಾಕ್ಷಿಗೆ ದಾವಾ ಆಸ್ತಿಯು ಪ್ರತಿವಾದಿಯ ಪಿತ್ರಾರ್ಜಿತ ಆಸ್ತಿ ಎಂಬ ಪ್ರಶ್ನೆಗೆ ಸಾಕ್ಷಿಯು ದಾವಾ ಆಸ್ತಿಯು ದೇವಿರಮ್ಮನ ಪಿತ್ರಾರ್ಜಿತ ಆಸ್ತಿ ಎಂದು ನುಡಿಯುತ್ತಾರೆ. ದಾವಾ ಅಸ್ತಿಯಲ್ಲಿ ಈಗ ಪ್ರತಿವಾದಿ ಸ್ವಾಧೀನಾನುಭವದಲ್ಲಿದ್ದು ಮತ್ತು ಖಾತೆ ಮತ್ತು ಪಹಣಿಯು ಪ್ರತಿವಾದಿಯ ಹೆಸರಿನಲ್ಲಿ ಇದ್ದರೂ ಸಹ ದಾವಾ ಆಸ್ತಿಯಲ್ಲಿ ನಾನು ಸ್ವಾಧೀನಾನುಭವದಲ್ಲಿದ್ದೇನೆಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ಸುಮಾರು 25 ವರ್ಷಗಳಿಂದ ದಾವಾ ಆಸ್ತಿಯಲ್ಲಿ ನಾನೇ ಸಾಗುವಳಿ ಮಾಡುತ್ತಿದ್ದೇನೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯ ಮೇಲೆ ನನಗೆ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲದಿದ್ದರೂ ಸಹ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.